O.S.No. 399/2021
PW -1

ದಿನಾಂಕ 06/01/2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯ್ತು.

ಮುಖ್ಯ ವಿಚಾರಣೆ :- ಶ್ರೀ ಹೆಚ್.ಟಿ.ಟಿ.ವಾದಿ ಪರ ವಕೀಲರಿಂದ

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಅಂಶಗಳೆಲ್ಲವೂ ಸತ್ಯವಾಗಿದೆ, ಹಾಗೂ ಸದರಿ ಪ್ರಮಾಣ ಪತ್ರಕ್ಕೆ ನಾನೇ ತಿಳಿದು ಸಹಿ ಮಾಡಿರುತ್ತೇನೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಈ ದಿನ ನೋಟರಿ ರವರ ಮುಂದಿನ ವಂಶವೃಕ್ಷದ ಪ್ರಮಾಣ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಗರಣಿ ಗ್ರಾಮದ ಸರ್ವೆನಂ-175 ಹಾಗೂ 102 ಇವುಗಳ 2 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಾಮವಾಗಿ ನಿಪಿ-2 ಮತ್ತು ನಿಪಿ-3 ಎಂದು, ಎಂ.ಆರ್ ಸಂಖ್ಯೆ-16/1972-73 ಇದರ ಮುಟೇಷನ್‌ನ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ಎಂ.ಆರ್ ಸಂಖ್ಯೆ-74/1964-65 ಇದರ ಮುಟೇಷನ್‌ನ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ದಿ.12/03/1973 ರ ಕ್ರಯ ಪತ್ರದ ದೃಢೀಕೃತ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಆರ್ ಆರ್ ಟಿ ಪ್ರಕರಣ ಸಂಖ್ಯೆ-234/2020-21 ಇದರ ನೋಟೀಸಿನ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು , ಸಮಯ ನೀಡಲಾಯಿತು.

(ತೆ ನ್ಯಾ ನ ಉ ಲೇ ಬೆ ಮಾ )

ಓ ಹೇ ಕೇ ಸ ಇ ಎ ಒ

( ರಘುನಾಥ ಗೌಡ ಕೆ.ಟಿ. )
ಪ್ರಧಾನ ಸಿವಿಲ್ ಜಡ್ಜ್, ಮಧುಗಿರಿ